ಓ.ಎಸ್. ನಂಃ 108/2025

**ಪಿ.ಡಬ್ಲ್ಯೂಃ 1**

**ದಿನಾಂಕ 22-08-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿಯ ಪರ: ಶ್ರೀ.ಕೆ.ಪಿ.ಎಸ್.ವಕೀಲರಿಂದಃ**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ರೂಪದಲ್ಲಿ ಸಲ್ಲಿಸುತ್ತಿದ್ದು ಅದನ್ನು ನನ್ನ ಮಾಹಿತಿ ಮೇರೆಗೆ ನನ್ನ ವಕೀಲರು ತಯಾರಿಸಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದಾಗಿರುತ್ತದೆ.

ವಂಶವೃಕ್ಷ ಪ್ರಮಾಣ ಪತ್ರವನ್ನು ನಿಪಿ.1 ಎಂದು, ದಿನಾಂಕ 18.11.2023 ರ ನೊಂದಾಯಿತ ವಿಭಾಗ ಪತ್ರದ ಅಸಲು ಪ್ರತಿಯನ್ನು ನಿಪಿ.2 ಎಂದು, ಋಣಭಾರ ಸಾಹಿತ್ಯ ಪ್ರಮಾಣ ಪತ್ರವನ್ನು ನಿಪಿ.3 ಎಂದು, ನಮೂನೆ-9 ಮತ್ತು 11ನ್ನು ನಿಪಿ.4 ರಿಂದ 7 ಎಂದು, ತೆರಿಗೆ ಪಾವತಿ ರಸೀದಿಗಳನ್ನು ನಿಪಿ.8 ರಿಂದ 13 ಎಂದು, ದಿನಾಂಕ 30.01.2024 ರಂದು ಗ್ರಾಮ ಪಂಚಾಯಿತಿಗೆ ಸಲ್ಲಿಸಿದ ಅರ್ಜಿಯ ಸ್ವೀಕೃತಿ ನಕಲನ್ನು ನಿಪಿ.14 ಎಂದು, ದಿನಾಂಕ 24.01.2025 ರಂದು ಕಳುಹಿಸಿದ ಕಾನೂನು ತಿಳುವಳಿಕೆ ನೋಟಿಸನ್ನು ನಿಪಿ.15 ಎಂದು, ಅಂಚೆ ರಸೀದಿಯನ್ನು ನಿಪಿ.16 ಎಂದು, ಅಂಚೆ ಸ್ವೀಕೃತಿಯನ್ನು ನಿಪಿ.17 ಎಂದು ಗುರುತಿಸಲಾಯಿತು.

**ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು**

**ಕೆ.ಆರ್.ನಗರ**